# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 143 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17.08.2026 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ಒದಗಿಸುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 1243 ಮೆಟ್ರಿಕ್ ಪೂರ್ವ ಹಾಗೂ 1469 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಸೇರಿ ಒಟ್ಟು 2712 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ. ಜಿಲ್ಲಾವಾರು/ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರಗಳನ್ನು **ಅನುಬಂಧ- 1 ಮತ್ತು 2ನ್ನು** http://bcwd.karnataka.gov.in ರಲ್ಲಿ ಒದಗಿಸಿದೆ. |
| ಆ) | ಇರುವಂತಹ ವಿದ್ಯಾರ್ಥಿ ನಿಲಯಗಳಲ್ಲಿ ಬಹುತೇಕ ಕಡೆಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ಸಮಸ್ಯೆಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಉಚಿತ ಊಟ, ವಸತಿ ಸೌಕರ್ಯದ ಜೊತೆಗೆ ಶೈಕ್ಷಣಿಕವಾಗಿ ಪೂರಕವಾಗಿ ಅಗತ್ಯ ಸೌಲಭ್ಯಗಳಾದ ನೈಟ್‌ಡ್ರೆಸ್ ಮತ್ತು ಟ್ರಾಕ್‌ಸೂಟ್, ಪಠ್ಯ-ಪುಸ್ತಕ, ಲೇಖನ ಸಾಮಗ್ರಿಗಳು, ಶುಚಿ-ಸಂಭ್ರಮ ಕಿಟ್, ವೈದ್ಯಕೀಯ ಸೌಲಭ್ಯ, ದಿನಪತ್ರಿಕೆ, ಕ್ರೀಡಾ ಸಾಮಗ್ರಿಗಳು, ಹಾಸಿಗೆ -ಮಂಚ, ಕಠಿಣ ವಿಷಯಗಳ ಭೋದನೆಗೆ ಅಲ್ಪಕಾಲಿಕ ಭೋದಕರ ವ್ಯವಸ್ಥೆ, ಜಮಖಾನ-ಬೆಡ್‌ಶೀಟ್, ಮ್ಯಾಗಜಿನ್, ಶೈಕ್ಷಣಿಕ ಪೂರಕವಾಗಿ ನಿಲಯಗಳಲ್ಲಿ ವ್ಯಕ್ತಿತ್ವ ವಿಕಸನ, ವೃತ್ತಿ ಬುನಾದಿ ತರಬೇತಿ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಿಳುವಳಿಕೆ/ ಮಾರ್ಗದರ್ಶನ ನೀಡುವ ಸಲುವಾಗಿ ಕಾರ್ಯಾಗಾರವನ್ನು ಆಯೋಜಿಸಲಾಗುತ್ತಿದೆ. ಅನುದಾನದ ಲಭ್ಯತೆಯನುಸಾರ ಅತ್ಯಂತ ಅವಶ್ಯಕವಿರುವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ.<br><br>ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರಿಗಾಗಿ ವಾಟರ್ ಪ್ಯೂರಿಫೈಯರ್ ವ್ಯವಸ್ಥೆ ಕಲ್ಪಿಸಲಾಗಿದೆ. ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಸಂಖ್ಯಾಬಲಕ್ಕನುಗುಣವಾಗಿ |
| ಇ) | ಬಂದಿದ್ದಲ್ಲಿ, ಕುಡಿಯುವ ನೀರು, ಶೌಚಾಲಯ, ಗ್ರಂಥಾಲಯ, ಸ್ನಾನಗೃಹ, ವಿದ್ಯುತ್, ಹಾಸಿಗೆ, ಮೇಜು-ಕುರ್ಚಿ ಹಾಗೂ ಭದ್ರತಾ ವ್ಯವಸ್ಥೆಯಂತಹ ಮೂಲಭೂತ ಸೌಲಭ್ಯಗಳ ಕೊರತೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು; | |

| | | |
|---|---|---|
| | | ಶೌಚಾಲಯಗಳ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ.<br><br>ಮುಂದುವರೆದು, ಸ್ವಂತ ಕಟ್ಟಡ ಲಭ್ಯವಿಲ್ಲದ ವಿದ್ಯಾರ್ಥಿನಿಲಯಗಳನ್ನು ಮಂಜೂರಾತಿ ಸಂಖ್ಯೆಗನುಗುಣವಾಗಿ ಅಗತ್ಯ ಮೂಲಭೂತ ಸೌಕರ್ಯ ಮತ್ತು ಸ್ಥಳಾವಕಾಶ ಲಭ್ಯವಿರುವ ಸೂಕ್ತ ಬಾಡಿಗೆ ಕಟ್ಟಡಗಳನ್ನು ಪಡೆದು ನಿರ್ವಹಿಸಲಾಗುತ್ತಿದೆ. ಶೌಚಾಲಯಗಳ ಸ್ವಚ್ಛತೆಗೆ ನಿಗದಿಪಡಿಸಿರುವ ಅನುದಾನದಲ್ಲಿ ಗುತ್ತಿಗೆ ಆಧಾರದಲ್ಲಿ ಸಿಬ್ಬಂದಿಯನ್ನು ನಿಯೋಜಿಸಿಕೊಂಡು ಶೌಚಾಲಯಗಳ ಸ್ವಚ್ಛತೆಯನ್ನು ಮಾಡಿಸಲಾಗುತ್ತಿದೆ.<br><br>ವಿದ್ಯಾರ್ಥಿನಿಲಯಗಳ ನಿರ್ವಹಣೆ ಮತ್ತು ಮೇಲುಸ್ತುವಾರಿಗಾಗಿ ನಿಲಯ ಮೇಲ್ವಿಚಾರಕರು/ ನಿಲಯ ಪಾಲಕರು ಹುದ್ದೆ ಮಂಜೂರಾಗಿದ್ದು ವಿದ್ಯಾರ್ಥಿನಿಲಯದ ಸಂಪೂರ್ಣ ಜವಾಬ್ದಾರಿ ಹೊಂದಿರುತ್ತಾರೆ. ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ರಾತ್ರಿ ವೇಳೆ ಸುರಕ್ಷತೆಗಾಗಿ ರಾತ್ರಿ ಕಾವಲುಗಾರರನ್ನು ನೇಮಿಸಿಕೊಂಡು ನಿರ್ವಹಿಸಲಾಗುತ್ತಿದೆ. |
| ಈ) | ಕಳೆದ ಮೂರು ವರ್ಷಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳ ಕಟ್ಟಡ ದುರಸ್ಥಿ ನಿರ್ವಹಣೆ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಜಿಲ್ಲಾವಾರು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಖರ್ಚು ಮಾಡಲಾದ ವೆಚ್ಚದ ವಿವರ ನೀಡುವುದು? (ಕಾಮಗಾರಿವಾರು ವಿವರ ಒದಗಿಸುವುದು) | 2023-24, 2024-25 ಮತ್ತು 2025-26ನೇ ಸಾಲುಗಳಲ್ಲಿ ವಿದ್ಯಾರ್ಥಿನಿಲಯಗಳ ಕಟ್ಟಡ ದುರಸ್ತಿಗಾಗಿ ಜಿಲ್ಲಾವಲಯ ಕಾರ್ಯಕ್ರಮ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ವಹಣೆ ಕಾರ್ಯಕ್ರಮದಡಿ ಬಿಡುಗಡೆ ಮಾಡಿರುವ, ವೆಚ್ಚ ಮಾಡಿರುವ ಅನುದಾನದ ವಿವರ ಮತ್ತು ಕಾಮಗಾರಿಗಳ ವಿವರಗಳನ್ನು **ಅನುಬಂಧ-3, 4 ಮತ್ತು 5 ರಲ್ಲಿ** ಒದಗಿಸಿದೆ.<br><br>ರಾಜ್ಯವಲಯ ಯೋಜನೆಯಡಿ 2025-26ನೇ ಸಾಲಿನಲ್ಲಿ ಮಾತ್ರ ವಿದ್ಯಾರ್ಥಿನಿಲಯಗಳ ಕಟ್ಟಡ ದುರಸ್ತಿ ಕಾಮಗಾರಿಗಾಗಿ ರೂ.25.00 ಕೋಟಿಗಳನ್ನು ಬಿಡುಗಡೆ ಮಾಡಿದ್ದು, ವೆಚ್ಚ ಮಾಡಿರುವ ಅನುದಾನದ ವಿವರಗಳನ್ನು **ಅನುಬಂಧ-5ನ್ನು** http://bcwd.karnataka.gov.in ರಲ್ಲಿ ಒದಗಿಸಿದೆ. |

ಸಂಖ್ಯೆ:ಹಿಂವಕ **589** ಬಿಎಂಎಸ್ **2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು